ಸುಲ್ತಾನ್‌ಪಾಳ್ಯದಲ್ಲಿ ಹೆರಿಗೆ ಆಸ್ಪತ್ರೆ ಕಟ್ಟಡ ನಿರ್ಮಾಣ

55 - ಶ್ರೀ ಆರ್. ಕೃಷ್ಣಪ್ಪ (ಜಹಮಹಲ್) : ಮಾನ್ಯ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಯಮಹಲ್ ಕ್ಷೇತ್ರದಲ್ಲಿನ ಸುಲ್ತಾನ್ ಪಾಳ್ಯದಲ್ಲಿರುವ ಹೆರಿಗೆ ಆಸ್ಪತ್ರೆ ಕಟ್ಟಡದ ಕೆಲಸವನ್ನು ಯಾವಾಗ ಪ್ರಾರಂಭಿಸಲಾಯಿತು?

ಆ) ಈ ಆಸ್ಪತ್ರೆ ಕಟ್ಟಡಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ಹಾಗೂ 1994-95 (ಫೆಬ್ರವರಿ 1995 ರವರೆಗೆ) ರಲ್ಲಿ ಇದಕ್ಕಾಗಿ ವಿರ್ಚು ಮಾಡಿರುವ ಹಣವೆಷ್ಟು?

ಇ) ಈ ಆಸ್ಪತ್ರೆ ಕಟ್ಟಡದ ಕೆಲಸವನ್ನು ಯಾವಾಗ ಪೂರ್ಣಗೊಳಿಸಲಾಗುವುದು?

ಶ್ರೀ ಹೆಚ್.ಡಿ. ದೇವೇಗೌಡ (ಮುಖ್ಯಮಂತ್ರಿಗಳು) :

ಅ) ಯಾವುದೇ ಹೆರಿಗೆ ಆಸ್ಪತ್ರೆ ಕಟ್ಟಡದ ಕೆಲಸವನ್ನು ಪ್ರಾರಂಭಿಸಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಮೇಲಿನ (ಅ) ಮತ್ತು (ಆ) ಗಳಿಂದಾಗಿ ಉದ್ಭವಿಸುವುದಿಲ್ಲ.

ಅಂಜನಾಪುರ ಜಲಾಶಯಕ್ಕೆ ಅಡ್ಡಗೋಡೆ ಕಟ್ಟಡ

15 - ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ) : ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿಕಾರಿಪುರ ತಾಲ್ಲೂಕಿನ ಅಂಜನಾಪುರ ಜಲಾಶಯದ ಕೋಡಿ, ನೆರೆ ಹಾವಳಿಯಿಂದ ಒಡೆದುಹೋಗಿ ತಾತ್ಕಾಲಿಕ ಅಡ್ಡಗೋಡೆ ಕಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, 1995-96ನೇ ಸಾಲಿನಲ್ಲಿ ರೈತರಿಗೆ ಜಲಾಶಯದಿಂದ ನೀರು ಕೊಡಲು ಸಾಧ್ಯವೆ ಎಂಬ ಬಗ್ಗೆ ತಜ್ಞರ ಅಭಿಪ್ರಾಯ ಪಡೆಯಲಾಗಿದೆಯೇ;

ಇ) ಹದಿನೈದು ಸಾವಿರಕ್ಕೂ ಹೆಚ್ಚು ಎಕರೆ ಜಮೀನಿಗೆ ನೀರು ಕೊಡುವ ಈ ಜಲಾಶಯದ ಪೂರ್ಣ ಕಾಮಗಾರಿಯನ್ನು ಸರ್ಕಾರದವರು 1995-96ರಲ್ಲಿ ಕೈಗೊಳ್ಳುವರೆ?

ಶ್ರೀಮತಿ ಲೀಲಾವತಿ ಆರ್. ಪ್ರಸಾದ್ (ಸಣ್ಣ ನೀರಾವರಿ ರಾಜ್ಯ ಸಚಿವರು):

ಅ) ಬಂದಿದೆ.

ಆ) ತಜ್ಞರ ಅಭಿಪ್ರಾಯ ಪಡೆದಿಲ್ಲ. ಆದರೂ 1995-96ನೇ ಸಾಲಿನಲ್ಲಿ ಈಗಿರುವ ತಾತ್ಕಾಲಿಕ ವ್ಯವಸ್ಥೆಯಿಂದ ಅಚ್ಚುಕಟ್ಟು ಪ್ರದೇಶಕ್ಕೆ ನೀರನ್ನು ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಇ) ಈ ಜಲಾಶಯದ ಶಾಶ್ವತ ಕಾಮಗಾರಿಯನ್ನು 1995-96ರಲ್ಲಿ ಕೈಗೊಳ್ಳುವ ಬಗ್ಗೆ ಕ್ರಮ ತೆಗೆದುಕೊಳ್ಳಲಾಗುವುದು.

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ನಿವೇಶನಗಳನ್ನು ಹಂಚುವುದು

195 - ಶ್ರೀ ಬಿ.ಎಸ್. ಯಡಿಯೂರಪ್ಪ (ಶಿಕಾರಿಪುರ) : ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಳೆದ 5 ವರ್ಷಗಳಿಂದ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದವರು ಒಟ್ಟು ಎಷ್ಟು ಬಿಡಿ ನಿವೇಶನಗಳನ್ನು ಹಂಚಿದ್ದಾರೆ (ವರ್ಗವಾರು ವಿವರ ನೀಡುವುದು).